J0174

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ದಿನಾಂಕ: 03-09-2022 ರಂದು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು

**ಪ್ರಶ್ನೆ:**

ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳನ್ನು ಭೇಟಿ ಮಾಡಲು ನಿಗದಿಪಡಿಸಿರುವ ಸಮಯದಲ್ಲಿ ಅಧಿಕಾರಿಗಳು ಲಭ್ಯವಿಲ್ಲದಿರುವ ಬಗ್ಗೆ.

**ಉತ್ತರ:**

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಆಡಳಿತ ಸುಧಾರಣೆ) ಇಲಾಖೆಯ ಸುತ್ತೋಲೆ ಸಂ. ಸಿಆಸುಇ 49 ಕತವ 2019 ದಿನಾಂಕ: 11-12-2019 ರಲ್ಲಿ (ಪ್ರತಿ ಲಗತ್ತಿಸಿದೆ) ಸಚಿವಾಲಯ ಹಾಗೂ ರಾಜ್ಯ ಸರ್ಕಾರದ ಎಲ್ಲಾ ಕಚೇರಿಗಳಲ್ಲಿ ಅಧಿಕಾರಿ/ಸಿಬ್ಬಂದಿಗಳು ಪ್ರತಿ ದಿನ ಮಧ್ಯಾಹ್ನ 3.30 ಗಂಟೆಯಿಂದ 5.30 ಗಂಟೆಯವರೆಗೆ ಸಾರ್ವಜನಿಕರಿಗೆ ಭೇಟಿ ಮಾಡಲು ಸಮಯಾವಕಾಶ ಕಲ್ಪಿಸಿಕೊಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಮತ್ತು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಸುತ್ತೋಲೆ ಸಂಖ್ಯೆ ಮುಕಾ:4464335:2022 ದಿನಾಂಕ: 25-07-2022 ರಲ್ಲಿ (ಪ್ರತಿ ಲಗತ್ತಿಸಿದೆ) ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಕಚೇರಿಯ ಪ್ರಾರಂಭದ ಸಮಯದಿಂದ ಕಚೇರಿ ಅವಧಿ ಪೂರ್ಣವಾಗುವವರೆಗೆ ತಮಗೆ ನಿಗದಿಪಡಿಸಿದ ಸ್ಥಾನದಲ್ಲಿ ಇದ್ದು, ಕರ್ತವ್ಯ ನಿರ್ವಹಿಸತಕ್ಕದ್ದು, ಸಕಾರಣವಿದ್ದಲ್ಲಿ ಚಲನವಲನ ವಹಿಯಲ್ಲಿ ನಮೂದಿಸಿ, ಮೇಲಾಧಿಕಾರಿಗಳ ಪೂರ್ವಾನುಮತಿ ಪಡೆಯತಕ್ಕದ್ದು ಹಾಗೂ ಕಚೇರಿ ಅವಧಿಯಲ್ಲಿ ಸ್ವಸ್ಥಾನದಲ್ಲಿ ಇಲ್ಲದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಸಕ್ಷಮ ಪ್ರಾಧಿಕಾರವು ಸೂಕ್ತ ಶಿಸ್ತುಕ್ರಮ ಜರುಗಿಸತಕ್ಕದ್ದು ಎಂದು ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ, ಕಾರ್ಯದರ್ಶಿಗಳಿಗೆ, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ಕ್ಷೇತ್ರ ಇಲಾಖೆಗಳ ಮುಖ್ಯಸ್ಥರುಗಳಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಸೂಚನೆ ನೀಡಲಾಗಿರುತ್ತದೆ.

ಸಿಆಸುಇ (ಆಸು) 147 ಕತವ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿಗಳು

ಕರ್ನಾಟಕ ಸರ್ಕಾರ

411644335

ಸಂಖ್ಯೆ: ಮುಕಾ: :2022.

ಕರ್ನಾಟಕ ಸರ್ಕಾರದ ಸಚಿವಾಲಯ,
ಕೊ.ಸಂ.320, ವಿಧಾನಸೌಧ,
ಬೆಂಗಳೂರು, ದಿನಾಂಕ: 25.07.2022

## ಸುತ್ತೋಲೆ

**ವಿಷಯ:** ರಾಜ್ಯ ಸರ್ಕಾರಿ ನೌಕರರು ಕಛೇರಿಗೆ ನಿಗದಿತ ಅವಧಿಗೆ ಹಾಜರಾಗಲು ಹಾಗೂ ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಕಛೇರಿಯಲ್ಲಿ ಕಾರ್ಯ ನಿರ್ವಹಿಸಲು -ಸೂಚನೆ.

*****

ರಾಜ್ಯ ಸರ್ಕಾರದ ಕಛೇರಿಗಳಲ್ಲಿ ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗಲು ಹಾಗೂ ಕರ್ತವ್ಯದ ಅವಧಿಯಲ್ಲಿ ಕಾರ್ಯನಿಷ್ಠೆಯನ್ನು ತೋರಲು ಈಗಾಗಲೇ ಸರ್ಕಾರವು ಸಾಕಷ್ಟು ಸುತ್ತೋಲೆಗಳಲ್ಲಿ ಸೂಚನೆಗಳನ್ನು ನೀಡಿರುತ್ತದೆ.

ಆದಾಗ್ಯೂ, ಸರ್ಕಾರಿ ನೌಕರರು/ಅಧಿಕಾರಿಗಳಲ್ಲಿ ಸಮಯ ಪ್ರಜ್ಞೆ ಮತ್ತು ಕಾರ್ಯನಿಷ್ಠೆಯ ಕೊರತೆಯನ್ನು ಇತ್ತೀಚಿನ ದಿನಗಳಲ್ಲಿ ಅವಲೋಕಿಸಲಾಗಿದೆ.

ಸಾರ್ವಜನಿಕರು ದೂರದ ಸ್ಥಳಗಳಿಂದ ಸರ್ಕಾರಿ ಕಛೇರಿಯಲ್ಲಿನ ತಮ್ಮ ಕಾರ್ಯಗಳಿಗೆ ಬೆಳಗ್ಗೆ ನಿಗದಿತ ಅವಧಿಗೆ ಸರ್ಕಾರದ ಕಛೇರಿಗಳಿಗೆ ಭೇಟಿ ನೀಡಿದಾಗ ಬಹುತೇಕ ಕಛೇರಿಗಳಲ್ಲಿ ಸಿಬ್ಬಂದಿಗಳು/ಅಧಿಕಾರಿಗಳು ಕಛೇರಿಗೆ ಹಾಜರಾಗಿಲ್ಲದೇ ಇರುವ ಕಾರಣ ಸಾಮಾನ್ಯ ಜನರು ಬವಣೆ ಪಡುವಂತಾಗಿದೆ.

ಈ ಹಿನ್ನೆಲೆಯಲ್ಲಿ, ಸರ್ಕಾರದ ಕಛೇರಿಯ ಪ್ರಾರಂಭದ ಸಮಯ ಬೆಳಗ್ಗೆ 10.00ಗಂಟೆಗೆ ಕಡ್ಡಾಯವಾಗಿ ಹಾಜರಾಗುವುದು ಹಾಗೂ ಕಛೇರಿ ಅವಧಿ ಪೂರ್ಣವಾಗುವವರೆಗೆ ತಮಗೆ ನಿಗದಿಪಡಿಸಿದ ಸ್ಥಾನದಲ್ಲಿ ಇದ್ದು, ಕರ್ತವ್ಯ ನಿರ್ವಹಿಸತಕ್ಕದ್ದು. ಕಛೇರಿ ಅವಧಿಯಲ್ಲಿ ನೌಕರರು/ಅಧಿಕಾರಿಗಳು ಅನ್ಯ ಕರ್ತವ್ಯದ ಮೇರೆಗೆ ತೆರಳಬೇಕಾಗಿದ್ದಲ್ಲಿ, ಚಲನ-ವಲನ ವಹಿಯಲ್ಲಿ ಸಕಾರಣವನ್ನು ನಮೂದಿಸಿ, ಮೇಲಾಧಿಕಾರಿಗಳ ಪೂರ್ವಾನುಮತಿಯನ್ನು ಪಡೆಯತಕ್ಕದ್ದು. ನಿಗದಿತ ಕಾಲಾವಧಿಗಿಂತ ವಿಳಂಬವಾಗಿ ಹಾಜರಾಗುವ ಹಾಗೂ ಕಛೇರಿ ಅವಧಿಯಲ್ಲಿ ಸ್ವಸ್ಥಾನದಲ್ಲಿ ಇಲ್ಲದ /ಚಲನ-ವಲನ ವಹಿಯಲ್ಲಿ ನಮೂದಿಸಿ, ಮೇಲಾಧಿಕಾರಿಗಳ ಅನುಮತಿ ಪಡೆದಿಲ್ಲದ ನೌಕರರು:ಅಧಿಕಾರಿಗಳ ವಿರುದ್ಧ ಸಕ್ಷಮ ಪ್ರಾಧಿಕಾರವು ಸೂಕ್ತ ಶಿಸ್ತು ಕ್ರಮ ಜರುಗಿಸತಕ್ಕದ್ದು.

(ವಂದಿತಾ ಶರ್ಮಾ)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ :

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
3. ಎಲ್ಲಾ ಕ್ಷೇತ್ರ ಇಲಾಖೆಗಳ ಮುಖ್ಯಸ್ಥರು – ಆಯಾ ಇಲಾಖೆಗಳ ಕಾರ್ಯದರ್ಶಿಗಳ ಮೂಲಕ.
4. ರಕ್ಷಾ ಕಡತ/ ಬಿಡಿ ಪ್ರತಿಗಳು.

File No.DPARAR/49/KTV/2019-DPARAR_DS_EST-DPAR AR SE

**ಕರ್ನಾಟಕ ಸರ್ಕಾರ**

ಸಂ. ಸಿಆಸುಇ 49 ಕತವ 2019

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ.
ಬೆಂಗಳೂರು, ದಿನಾಂಕ: 11/12/2019

**ಸುತ್ತೋಲೆ**

ವಿಷಯ: ಅಧಿಕಾರಿಗಳು ಸಾರ್ವಜನಿಕರನ್ನು ಭೇಟಿ ಮಾಡಲು ನಿಗದಿಪಡಿಸಿರುವ ಸಂದರ್ಶನ ಸಮಯವನ್ನು ಪಾಲಿಸದಿರುವ ಬಗ್ಗೆ.

*******

ಕರ್ನಾಟಕ ಸರ್ಕಾರ ಸಚಿವಾಲಯ ಕೈಪಿಡಿಯ ಪ್ಯಾರಾ 272 (iii) ರನ್ವಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು ಕಾರ್ಯದರ್ಶಿಗಳು ಹಾಗೂ ಇತರ ಅಧಿಕಾರಿಗಳು ಮಧ್ಯಾಹ್ನ 3.30 ಗಂಟೆಯಿಂದ 5.30 ಗಂಟೆಯವರೆಗೆ ಸಾರ್ವಜನಿಕರು ಹಾಗೂ ಇತರರನ್ನು ಭೇಟಿ ಮಾಡುವ ಸಮಯವನ್ನಾಗಿ ನಿಗದಿಪಡಿಸಲಾಗಿದೆ. ಆದ್ದರಿಂದ ಪ್ರತಿ ದಿನ (ಸಾರ್ವಜನಿಕ ರಜೆ ಹೊರತುಪಡಿಸಿ) ಮಧ್ಯಾಹ್ನ 3.30 ಗಂಟೆಯಿಂದ 5.30 ಗಂಟೆಯವರೆಗೆ ಅಧಿಕಾರಿಗಳು ಯಾವುದೇ ಸಭೆಗಳನ್ನು ನಡೆಸದೇ ಸಾರ್ವಜನಿಕರಿಗೆ ಭೇಟಿ ಮಾಡಲು ಅವಕಾಶ ಕಲ್ಪಿಸುವಂತೆ ಸೂಚಿಸಲಾಗಿದೆ. ಹಾಗೂ ಮಾನ್ಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಮತ್ತು ಸಂಸತ್ ಸದಸ್ಯರು ತಮ್ಮ ಮತ ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚಿಸಲು ಕಛೇರಿಯ ಎಲ್ಲಾ ವೇಳೆಯಲ್ಲಿ ಮತ್ತು ಸಭೆಗಳ ಮಧ್ಯದಲ್ಲಿಯೂ ಸಹ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ಹಾಗೂ ಇತರ ಅಧಿಕಾರಿಗಳನ್ನು ಭೇಟಿ ಮಾಡಲು ಅವಕಾಶ ಕಲ್ಪಿಸುವಂತೆ ಸೂಚಿಸಿ ಸುತ್ತೋಲೆ ಸಂ. ಸಿಆಸುಇ 90 ಕತವ 2013 ದಿನಾಂಕ 09.12.2013ರಲ್ಲಿ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.

ಆದ್ದರಿಂದ ಈ ನಿಟ್ಟಿನಲ್ಲಿ ಸಚಿವಾಲಯದ ಎಲ್ಲಾ ಹಿರಿಯ ಅಧಿಕಾರಿಗಳು / ಬೆಂಗಳೂರು ಮಹಾನಗರ ಹಾಗೂ ಇನ್ನಿತರ ಮಹಾನಗರಗಳ ನಿಗಮ / ಮಂಡಳಿ/ ಪ್ರಾಧಿಕಾರಗಳ ಮುಖ್ಯಸ್ಥರುಗಳು ಮತ್ತು ರಾಜ್ಯ ಎಲ್ಲಾ ಇಲಾಖಾ ಮುಖ್ಯಸ್ಥರುಗಳು / ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿ ದಿನ (ಸಾರ್ವಜನಿಕ ರಜೆ ಹೊರತುಪಡಿಸಿ) ಮಧ್ಯಾಹ್ನ 3.30 ಗಂಟೆಯಿಂದ 5.30 ಗಂಟೆಯವರೆಗೆ ಯಾವುದೇ ಸಭೆಗಳನ್ನು ನಡೆಸದೇ ಸಾರ್ವಜನಿಕರಿಗೆ ಭೇಟಿ ಮಾಡಲು ಸಮಯಾವಕಾಶ ಕಲ್ಪಿಸಿ ಕೊಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

(ವಿ. ಮಂಜುಳ) 11/12/2019
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಸು)

ಗೆ

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2) ಸರ್ಕಾರದ ಮುಖ್ಯಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
4) ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು
5) ಸಚಿವಾಲಯದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
6) ಕಡತ ಪ್ರತಿ / ಹೆಚ್ಚುವರಿ ಪ್ರತಿ

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 90 ಕತವ 2013

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ:09/12/2013

## ಸುತ್ತೋಲೆ

ವಿಷಯ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಸಾರ್ವಜನಿಕರಿಗೆ ಮತ್ತು ಸಾರ್ವಜನಿಕ ಪ್ರತಿನಿಧಿಗಳಿಗೆ ಭೇಟಿ ಮಾಡಲು ಸಮಯ ಕಲ್ಪಿಸುವ ಬಗ್ಗೆ.

*******

ಕರ್ನಾಟಕ ಸರ್ಕಾರ ಸಚಿವಾಲಯ ಕೈಪಿಡಿಯ ಪ್ಯಾರಾ 272(iii) ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ಹಾಗೂ ಇತರ ಅಧಿಕಾರಿಗ್ಗಳು ಮಧ್ಯಾಹ್ನ 3.30 ಗಂಟೆಯಿಂದ 5.30 ಗಂಟೆಯವರೆಗೆ ಸಾರ್ವಜನಿಕರು ಹಾಗೂ ಇತರರನ್ನು ಭೇಟಿ ಮಾಡುವ ಸಮಯವನ್ನಾಗಿ ನಿಗದಿಪಡಿಸಲಾಗಿದೆ. ಆದ್ದರಿಂದ ಪ್ರತಿ ದಿನ (ಸಾರ್ವಜನಿಕ ರಜೆ ಹೊರತು ಪಡಿಸಿ) ಮಧ್ಯಾಹ್ನ 3.30 ಗಂಟೆಯಿಂದ 5.30 ಗಂಟೆಯವರೆಗೆ ಅಧಿಕಾರಿಗಳು ಯಾವುದೇ ಸಭೆಗಳನ್ನು ನಡೆಸದೆ ಸಾರ್ವಜನಿಕರಿಗೆ ಭೇಟಿ ಮಾಡಲು ಅವಕಾಶ ಕಲ್ಪಿಸುವಂತೆ ಸೂಚಿಸಲಾಗಿದೆ.

ಇದಲ್ಲದೆ ಮಾನ್ಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಮತ್ತು ಸಂಸತ್ ಸದಸ್ಯರು ತಮ್ಮ ಮತಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚಿಸಲು ಕಛೇರಿಯ ಎಲ್ಲಾ ವೇಳೆಯಲ್ಲಿ ಮತ್ತು ಸಭೆಗಳ ಮಧ್ಯದಲ್ಲಿಯೂ ಸಹ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಹಾಗೂ ಅಧೀನ ಅಧಿಕಾರಿಗಳನ್ನು ಭೇಟಿ ಮಾಡಲು ಅವಕಾಶ ಕಲ್ಪಿಸಿಕೊಡುವುದು. ಈ ಬಗ್ಗೆ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ತಮ್ಮ ಆಪ್ತ ಕಾರ್ಯದರ್ಶಿಗಳಿಗೆ ಸೂಕ್ತ ಸೂಚನೆಗಳನ್ನು ನೀಡುವುದು ಅತ್ಯವಶ್ಯವಾಗಿದೆ.

ಸಾರ್ವಜನಿಕ ಪ್ರತಿನಿಧಿಗಳೊಂದಿಗೆ ಸೌಜನ್ಯಯುತ ರೀತಿಯಲ್ಲಿ ಪ್ರತಿಕ್ರಿಯಿಸುವಂತೆ ಅಧಿಕಾರಿಗಳಿಗೆ ಮನರುಚ್ಚರಿಸಲಾಗಿದೆ.

(ವಿ.ಉಮೇಶ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ

ಗೆ:

1) ಸರ್ಕಾರದ ಎಲ್ಲ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನ ಸೌಧ,ಬೆಂಗಳೂರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಪ್ರವಾಸೋದ್ಯಮ/ವಾಣಿಜ್ಯ ಮತ್ತು ಕೈಗಾರಿಕೆ/ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ/ಒಳಾಡಳಿತ ಇಲಾಖೆ.
5) ಸಚಿವಾಲಯದ ಎಲ್ಲ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
6) ಕಡತ ಪ್ರತಿ/ಹೆಚ್ಚುವರಿ ಪ್ರತಿಗಳು.

C 19